**ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಮರಿತಿಬ್ಬೇಗೌಡ ಇವರು ನಿಯಮ 330ರಡಿ ನೀಡಿರುವ ಸೂಚನೆಗೆ ಸರ್ಕಾರದ ಉತ್ತರ.**

:ವಿಷಯ:

**ಕಾಲ್ಪನಿಕ ವೇತನ ಬಡ್ತಿ ಸಂಬಂಧ ಶ್ರೀ ಬಸವರಾಜ ಹೊರಟ್ಟಿಯವರ ನೇತೃತ್ವದ ಸಮಿತಿಯನ್ನು ರಚನೆ ಮಾಡಲಾಗಿತ್ತು. ಸಮಿತಿ ವರದಿ ನೀಡಿದ್ದರೂ ಸದರಿ ವರದಿಯನ್ನು ಇದುವರೆವಿಗೂ ಜಾರಿಗೊಳಿಸದೇ ಇರುವುದರಿಂದ ಉಂಟಾದ ಗಂಭೀರ ಸಮಸ್ಯೆ ಕುರಿತು ಪ್ರಸ್ತಾಪಿಸಿರುತ್ತಾರೆ.**

:ಉತ್ತರ:

ರಾಜ್ಯದ ಅನುದಾನಿತ ಶಾಲಾ/ಕಾಲೇಜುಗಳಲ್ಲಿ ಕೆಲಸ ನಿರ್ವಹಿಸುತ್ತಿರುವ ಶಿಕ್ಷಕರುಗಳಿಗೆ "ಕಾಲ್ಪನಿಕ ವೇತನ" ನೀಡುವ ಕುರಿತು ರಚನೆಯಾಗಿದ್ದ ಶ್ರೀ ಬಸವರಾಜ ಹೊರಟ್ಟಿ ರವರ ಅಧ್ಯಕ್ಷತೆಯ ಸಮಿತಿಯು ದಿನಾಂಕ:17-03-2015ಮತ್ತು 06.02.2018ರಂದು ಎರಡು ವರದಿಗಳನ್ನು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

**ದಿನಾಂಕ:17-03-2015ರಂದು ಸಲ್ಲಿಸಿರುವ ವರದಿಯಲ್ಲಿನ ಪ್ರಮುಖ ಅಂಶಗಳು ಈ ಕೆಳಗಿನಂತಿದೆ:-**

1. ವಿಧೇಯಕ 2014ನ್ನು ದಿನಾಂಕ:01ನೇ ಜೂನ್ 1995ರ ಬದಲಾಗಿ ದಿನಾಂಕ:12-02-2014ರಿಂದ ಜಾರಿಗೆ ಬರುವಂತೆ ತಿದ್ದುಪಡಿ ಮಾಡಲು;

2. ಈಗ ರದ್ದಾಗಿರುವ ಆದೇಶದನ್ವಯ ಸೇವಾ ಸೌಲಭ್ಯಗಳನ್ನು ಪಾವತಿ ಮಾಡಲಾದ ಯಾವುದೇ ಮೊತ್ತವನ್ನು ವಸೂಲು ಮಾಡದಿರಲು;

3. ನಿವೃತ್ತಿ ಹೊಂದಿರುವ ಶಿಕ್ಷಕರಿಗೆ ಸಂಬಂಧಿಸಿದಂತೆ ಪಿಂಚಣಿ ನಿಗಧಿ ಮಾಡುವಾಗ ಅವರು ಅನುದಾನರಹಿತ ಅವಧಿಯ ಸೇವೆಯನ್ನು ಹೊರತುಪಡಿಸಿ ಪಿಂಚಣಿಯನ್ನು ನಿಗಧಿ ಪಡಿಸುತ್ತಿದ್ದು ಮತ್ತು ಈಗಾಗಲೇ ಅನುದಾನರಹಿತ ಅವಧಿಯನ್ನು ಪರಿಗಣನೆಗೆ ತೆಗೆದುಕೊಂಡು ಪಿಂಚಣಿಗೆ ನಿಗಧಿಪಡಿಸಿರುವ ಸೌಲಭ್ಯವನ್ನು ಹಿಂಪಡೆದು ಕಡಿತಗೊಳಿಸದಂತೆ ಆದೇಶ ಹೊರಡಿಸುವಂತೆ;

4. ಕಾಲ್ಪನಿಕ ವೇತನ ಸೌಲಭ್ಯದಿಂದ ಸುಮಾರು 25 ಸಾವಿರ ನೌಕರರು ವಂಚಿತರಾಗಲಿದ್ದು, ವಾರ್ಷಿಕವಾಗಿ ರೂ. 351 ಕೋಟಿಗಳು ಕಾಲ್ಪನಿಕ ವೇತನಕ್ಕೆ ತಗುಲಲಿದ್ದು, ಸಮಸ್ಯೆಗೆ ಅಂತಿಮ ಪರಿಹಾರ ನೀಡಲು ವಿಧೇಯಕಕ್ಕೆ ಆಡಳಿತಾತ್ಮಕ ಆದೇಶ ಹೊರಡಿಸುವುದು.

**ದಿನಾಂಕ:06/02/2018ರಂದು ಸಲ್ಲಿಸಿರುವ ವರದಿಯಲ್ಲಿನ ಪ್ರಮುಖ ಅಂಶಗಳು ಈ ಕೆಳಗಿನಂತಿದೆ:-**

ಖಾಸಗಿ ಅನುದಾನಿತ ಶಿಕ್ಷಣ ಸಂಸ್ಥೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅನುದಾನಿತ ಸಿಬ್ಬಂದಿಯವರಿಗೆ ಕಾಲ್ಪನಿಕ ವೇತನ ನಿಗದಿ ಮಾಡಿ, ವೇತನವನ್ನು ಪುನರ್ ನಿಗದಿಪಡಿಸಿ ವೇತನ ಸೌಲಭ್ಯವನ್ನು ಹಾಗೂ ಪಿಂಚಣಿ, ಗ್ರಾಚ್ಯುಟಿ ಸೌಲಭ್ಯವನ್ನು ನೀಡುವುದು;

2,,,,

A. ಅನುದಾನರಹಿತ ಅವಧಿಯನ್ನು ಪರಿಗಣಿಸಿ ಪದೋನ್ನತಿ, Time Bound ಹಾಗೂ ಪ್ಲೇಸ್‌ಮೆಂಟ್ ಸೌಲಭ್ಯವನ್ನು ನೀಡುವುದು.

B. ಕಾಲ್ಪನಿಕ ವೇತನ ನಿಗಧಿಪಡಿಸಿದ ನಂತರ ಯಾವುದೇ ನೌಕರರು ಹಿಂದಿನ ಯಾವುದೇ ಬಾಕಿಯನ್ನು ಕೇಳುವಂತಿಲ್ಲ;

C. ನ್ಯಾಯಾಲಯದಲ್ಲಿ ಈ ಪ್ರಕರಣಕ್ಕೆ ಸಂಬಂಧಿಸಿದಂತೆ ದಾವೆ ಹೂಡಿರುವವರು ತಮ್ಮ ಪ್ರಕರಣಕ್ಕೆ ಸಂಬಂಧಿಸಿದಂತೆ ತಮ್ಮ ಪ್ರಕರಣಗಳನ್ನು ವಾಪಸ್ ಪಡೆದಲ್ಲಿ, ಈ ಸೌಲಭ್ಯಕ್ಕೆ ಅರ್ಹರಿರುತ್ತಾರೆಂಬ ಅಂಶವನ್ನು ಇಲಾಖೆಯ ಆದೇಶದಲ್ಲಿ ಸ್ಪಷ್ಟಪಡಿಸುವುದು.

D. ಈಗಾಗಲೇ ಈ ಸೌಲಭ್ಯವನ್ನು ಪಡೆಯುತ್ತಿರುವವರಿಗೆ ಯಥಾವತ್ತಾಗಿ ಮುಂದುವರೆಸುವುದು ಹಾಗೂ ಈಗಾಗಲೇ ಆರ್ಥಿಕ ಸೌಲಭ್ಯವನ್ನು ಪಡೆದು ನಿವೃತ್ತಿ ಆಗಿರುವ/ಆಗಲಿರುವ ನೌಕರರಿಗೆ ಯಾವುದೇ ರೀತಿಯ ಆರ್ಥಿಕ ಕಡಿತವನ್ನು ಮಾಡಬಾರದು. ನಿವೃತ್ತಿ ವೇತನ ನಿಗದಿಪಡಿಸುವಾಗ ಅನುದಾನರಹಿತ ಅವಧಿಯನ್ನು ಕಡಿತಗೊಳಿಸಿ ಪುನರ್‌ನಿಗದಿಪಡಿಸಬಾರದು;

E. ನಿವೃತ್ತರಾಗುತ್ತಿರುವವರಿಗೆ ನಿವೃತ್ತಿ ಉಪದಾನವನ್ನು ಕಡಿತಗೊಳಿಸದಂತೆ ಸರ್ಕಾರಿ ಆದೇಶ ಹೊರಡಿಸುವುದು;

ಅನುದಾನ ಸಂಹಿತೆ ಪ್ರಕಾರ ಅನುದಾನಕ್ಕೊಳಪಟ್ಟ ಸಿಬ್ಬಂದಿಗೆ ಅನುದಾನ ದೊರೆತ ದಿನಾಂಕದಿಂದ ಮಾತ್ರ ಕನಿಷ್ಠ ವೇತನ ನಿಗದಿ ಮಾಡಬೇಕು ಹಾಗೂ ಹಿಂದಿನ ಸೇವಾವಧಿಯನ್ನು ಯಾವುದೇ ಸೇವಾ ಸೌಲಭ್ಯಕ್ಕೆ ಪರಿಗಣಿಸುವಂತಿಲ್ಲ. ಈ ಸಂಬಂಧ ಸರ್ಕಾರವು ದಿನಾಂಕ:01.06.1995ರಿಂದಲೇ ಪೂರ್ವಾನ್ವಯವಾಗಿ ಜಾರಿಗೆ ಬರುವಂತೆ ಕರ್ನಾಟಕ ಖಾಸಗಿ ಅನುದಾನಿತ ಶೈಕ್ಷಣಿಕ ಸಂಸ್ಥೆಗಳ ಸಿಬ್ಬಂಧಿಗಳ (ವೇತನ, ನಿವೃತ್ತಿ ವೇತನ ಮತ್ತು ಇತರೆ ಸೌಲಭ್ಯಗಳ ನಿಯಂತ್ರಣ) ಅಧಿನಿಯಮ 2014ನ್ನು ಜಾರಿಗೆ ತರಲಾಗಿದೆ.

ಈ ಅಧಿನಿಯಮವನ್ನು ಅನುದಾನಿತ ಶಿಕ್ಷಣ ಸಂಸ್ಥೆಗಳ ಸಿಬ್ಬಂಧಿಗಳು ಪ್ರಶ್ನಿಸಿರುವ ರಿಟ್ ಅರ್ಜಿಗಳಾದ 21216/2014 ಮತ್ತು 14307/2014 ಮತ್ತು ತತ್ಸಬಂಧದ ಪ್ರಕರಣಗಳಲ್ಲಿ ಮಾನ್ಯ ಉಚ್ಚನ್ಯಾಯಾಲಯವು ದಿನಾಂಕ:10.07.2015ರಂದು ನೀಡಿದ ತೀರ್ಪಿನಲ್ಲಿ ಸದರಿ ಅಧಿನಿಯಮ 2014ನ್ನು "struck down" ಮಾಡಿರುತ್ತದೆ.

ಮೇಲಿನ ಮಾನ್ಯ ಉಚ್ಚ ನ್ಯಾಯಾಲಯದ ತೀರ್ಪನ್ನು ಪ್ರಶ್ನಿಸಿ ಸರ್ಕಾರವು ಮಾನ್ಯ ಉಚ್ಚ ನ್ಯಾಯಾಲಯ, ಬೆಂಗಳೂರು ಇಲ್ಲಿ ರಿಟ್ ಅಪೀಲು ಸಂಖ್ಯೆ:2476/2015 ಮತ್ತು 2467/2015ನ್ನು ದಾಖಲಿಸಿದೆ. ಮೇಲಿನ ರಿಟ್ ಅರ್ಜಿಗಳಲ್ಲಿ ದಿನಾಂಕ:10.07.2015ರಂದು ನೀಡಿದ ತೀರ್ಪಿಗೆ ದಿನಾಂಕ:27.11.2015ರಂದು ತಡೆಯಾಜ್ಞೆ ನೀಡಿರುತ್ತದೆ. ಸದರಿ ತಡೆಯಾಜ್ಞೆಯು ಪ್ರಸ್ತುತ ಜಾರಿಯಲ್ಲಿದ್ದು, ಪ್ರಕರಣವು ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ಬಾಕಿಯಿರುತ್ತದೆ.

ಮಾನ್ಯ ಶ್ರೀ ಬಸವರಾಜ ಹೊರಟ್ಟಿರವರ ಅಧ್ಯಕ್ಷತೆಯ ಸಮಿತಿಯ ವರದಿ ಮತ್ತು ಇಲಾಖೆಗಳಲ್ಲಿನ ವಾಸ್ತವ ಅಂಕಿಅಂಶಗಳನ್ನು ಪರಿಶೀಲಿಸಲಾಗಿ, ದಿನಾಂಕ:31.03.2015ಕ್ಕೆ ವೇತನಕ್ಕೆ ಅನುದಾನ ರಹಿತ ಅವಧಿಯನ್ನು ಪರಿಗಣನೆಗೆ ತೆಗೆದುಕೊಂಡು ವೇತನವನ್ನು ಪರಿಷ್ಕರಿಸಿದಲ್ಲಿ ಹೆಚ್ಚುವರಿಯಾಗಿ ವಾರ್ಷಿಕವಾಗಿ ರೂ.359.87ಕೋಟಿಗಳ ಅನುದಾನವು ಬೇಕಾಗುತ್ತದೆ. ಆದರೆ, ಅವರಿಗೆ ಹಿಂಬಾಕಿ ಮತ್ತು ಪಿಂಚಣಿಗಾಗಿ ತಗಲುವ ಅಂದಾಜು ವೆಚ್ಚವು ಪ್ರಸ್ತಾಪಿತ ರೂ.359.87 ಕೋಟಿಗಳಲ್ಲಿ ಒಳಗೊಂಡಿರುವುದಿಲ್ಲ. ರೂ.359.87/– ಕೋಟಿ ಒಂದು ವರ್ಷಕ್ಕೆ ಬೇಕಾದ ಹೆಚ್ಚುವರಿ ಮೊತ್ತವಾಗುತ್ತದೆ. ಈ ಅನುಕೂಲ ಪಡೆಯುವ ಸಿಬ್ಬಂದಿ ಪೂರ್ಣ ಸೇವಾವಧಿಯಲ್ಲಿ ಪಡೆಯುವ ಮೊತ್ತದ ಒಟ್ಟು ಮೊತ್ತದ ಲೆಕ್ಕಾಚಾರ ಇಲಾಖೆಗಳಲ್ಲಿ ಇನ್ನು ಆಗಿರುವುದಿಲ್ಲ. ಹಾಗೆಯೇ ನಿವೃತ್ತಿ ಸೌಲಭ್ಯಗಳ ಒಟ್ಟಾರೆ ಆರ್ಥಿಕ ಹೊರೆ ಅಂದಾಜು ರೂ.1637.00 ಕೋಟಿಗಿಂತ ಹೆಚ್ಚಾಗಿದ್ದು, ಇದರ ವರ್ಷವಾರು ಆರ್ಥಿಕ ಹೊರೆ ಸಹ ಲೆಕ್ಕಹಾಕಿರುವುದಿಲ್ಲ. ಈ ಎರಡೂ ಮೊತ್ತಗಳ ಮಾಹಿತಿಯನ್ನು ಸಂಗ್ರಹಿಸಲಾಗುತ್ತಿದೆ. ಅನುದಾನರಹಿತ ಸೇವಾವಧಿಯನ್ನು ಪರಿಗಣಿಸಿದಲ್ಲಿ ನೀಡಬೇಕಾದ ವೇತನ ಬಾಕಿ(Arrears) ಮೊತ್ತ ರೂ.3083.00 ಕೋಟಿಗಳೆಂದು ಆ ಪ್ರಕಾರ ದಿನಾಂಕ:31.03.2015ಕ್ಕೆ ರೂ.5081.01 ಕೋಟಿಗಳೆಂದು ಅಂದಾಜಿಸಲಾಗಿದೆ.

ಮುಂದುವರೆದು, ಅನುದಾನರಹಿತ ಅವಧಿಯನ್ನು ಪರಿಗಣನೆಗೆ ತೆಗೆದುಕೊಂಡು ವೇತನ, ಬಾಕಿವೇತನ ಹಾಗೂ ನಿವೃತ್ತಿ ವೇತನ ಸೌಲಭ್ಯಗಳನ್ನು ಪರಿಷ್ಕರಿಸಿದ್ದಲ್ಲಿ ದಿನಾಂಕ:31.03.2022ರವರೆಗೆ ರೂ.9349.00 ಕೋಟಿಗಳೆಂದು ಅಂದಾಜಿಸಲಾಗಿದೆ.

ಮೇಲ್ಕಂಡ ಅಂಶಗಳ ಹಿನ್ನೆಲೆಯಲ್ಲಿ, ಕಾಲ್ಪನಿಕ ವೇತನ ಬಡ್ತಿಯನ್ನು ಜಾರಿಗೊಳಿಸುವ ಬಗ್ಗೆ ಸರ್ಕಾರಕ್ಕೆ ಯಾವುದೇ ನಿಲುವನ್ನು ತಳೆಯಲು ಸಾಧ್ಯವಾಗಿರುವುದಿಲ್ಲ.

ಸಂ: ಇಪಿ 237 ಎಸ್‌ಇಎಸ್ 2023

(ಎಸ್. ಮಧುಬಂಗಾರಪ್ಪ)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು